ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
Karnatak University, Dharwad.
ಪರೀಕ್ಷಾ ವಿಭಾಗ
Examination Section

ಗೌಪ್ಯ ವಿಭಾಗ
Confidential Branch

ಫೋನ ನಂ. 0836-2215259
ಫ್ಯಾಕ್ಸ ನಂ. 0836-2741928

ನಂ. ಕವಿವಿ/ಪರೀಕ್ಷಾ(ಗೌಪ್ಯ)/2019/ 603

ದಿನಾಂಕ: 27.03.2019

**ಸುತ್ತೋಲೆ**

ವಿಷಯ : ಒಂದು ಬಾರಿ ಅವಕಾಶದಡಿಯಲ್ಲಿ ಅರ್ಜಿ ತುಂಬಿದ ವಿದ್ಯಾರ್ಥಿಗಳಿಗೆ ಮಾರ್ಚ/ಎಪ್ರೀಲ, 2019ರಲ್ಲಿ ಪ್ರಾಯೋಗಿಕ ಪರೀಕ್ಷೆಗಳನ್ನು ಜರುಗಿಸುವ ಕುರಿತು.

ಉಲ್ಲೇಖ: ಸುತ್ತೋಲೆ ನಂ. ಕವಿವಿ/ಪರೀಕ್ಷಾ(ಗೌಪ್ಯ)/2019/586 ದಿನಾಂಕ 14.03.2019

*-*-*

ಕರ್ನಾಟಕ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲ ಸಂಲಗ್ನ ಹಾಗೂ ಅಧೀನ ಮಹಾವಿದ್ಯಾಲಯಗಳ ಪ್ರಾಚಾರ್ಯರಿಗೆ ತಿಳಿಸುವುದೇನೆಂದರೆ, ಒಂದು ಬಾರಿ ಅವಕಾಶದಡಿಯಲ್ಲಿ 2, 4 ಮತ್ತು 6ನೇ ಸೆಮಿಸ್ಟರ್ / ನಾನ್-ಸೆಮಿಸ್ಟರ್ ಪ್ರಾಯೋಗಿಕ ಪರೀಕ್ಷೆಗಳಲ್ಲಿ ಅನುತ್ತೀರ್ಣರಾದಂತಹ ಅನಿಯಮಿತ ವಿದ್ಯಾರ್ಥಿಗಳು ಪ್ರಾಯೋಗಿಕ ಪರೀಕ್ಷೆಯ ಓ.ಎಂ.ಆರ್ ಅರ್ಜಿ ತುಂಬಿದಲ್ಲಿ ಉಲ್ಲೇಖಿತ ಕಚೇರಿ ಸುತ್ತೋಲೆಯಲ್ಲಿ ತಿಳಿಸಿದಂತೆ ದಿನಾಂಕ 28.03.2019 ರಿಂದ 13.04.2019ರವರೆಗೆ ರೆಗ್ಯುಲರ್ ವಿದ್ಯಾರ್ಥಿಗಳ ಪ್ರಾಯೋಗಿಕ ಪರೀಕ್ಷೆ ಜರುಗುವ ಸಂದರ್ಭದಲ್ಲಿಯೇ ಈ ವಿದ್ಯಾರ್ಥಿಗಳಿಗೂ ಕೂಡ ಪ್ರಾಯೋಗಿಕ ಪರೀಕ್ಷೆ ಜರುಗಿಸಲು ಸೂಚಿಸಲಾಗಿದೆ. ಮುಂದುವರೆದು, ಪ್ರಾಯೋಗಿಕ ಪರೀಕ್ಷೆಗಳನ್ನು ಜರುಗಿಸಿದ ನಂತರ ಅಂಕಗಳ ಯಾದಿಯನ್ನು ದ್ವಿ-ಪ್ರತಿಯಲ್ಲಿ ತಯಾರಿಸಿ ಒಂದು ಪ್ರತಿಯನ್ನು ಸಂಬಂಧಿಸಿದ ಪರೀಕ್ಷಾ ವಿಭಾಗದ ಅಧೀಕ್ಷಕರಿಗೆ ಹಾಗೂ ಇನ್ನೊಂದು ಪ್ರತಿಯನ್ನು ಸಿಸ್ಟಮ್ ಅನ್ಯಾಲಿಸ್ಟ, ಗಣಕ ಯಂತ್ರ, ಪರೀಕ್ಷಾ ವಿಭಾಗ ಇವರಿಗೆ ಕಳುಹಿಸಲು ಹಾಗೂ ಉಲ್ಲೇಖದಲ್ಲಿ ಸೂಚಿಸಿದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

ಕುಲಸಚಿವರು (ಮೌಲ್ಯಮಾಪನ)

ಗೆ,
ಪ್ರಾಚಾರ್ಯರು, ಕರ್ನಾಟಕ ವಿಶ್ವವಿದ್ಯಾಲಯದ ಎಲ್ಲ ಸಂಲಗ್ನ ಹಾಗೂ ಅಧೀನ ಮಹಾವಿದ್ಯಾಲಯಗಳು.

**ಪ್ರತಿ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ :**

1. ಹಣಕಾಸು ಅಧಿಕಾರಿಗಳು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
2. ಉಪಕುಲಸಚಿವರು / ಸಹಾಯಕ ಕುಲಸಚಿವರು, ಪರೀಕ್ಷಾ ವಿಭಾಗ, ಕನಾಟಕ ವಿಶ್ವವಿದ್ಯಾಲಯ, ಧಾರವಾಡ.
3. ಸಿಸ್ಟಮ್ ಅನಾಲಿಸ್ಟ, ಗಣಕಯಂತ್ರ ಕೇಂದ್ರ, ಪರೀಕ್ಷಾ ವಿಭಾಗ, ಕ.ವಿ.ವಿ.ಧಾರವಾಡ.
4. ಪರೀಕ್ಷಾ ವಿಭಾಗದ ಎಲ್ಲ ಶಾಖೆಗಳ ಅಧೀಕ್ಷಕರ ಮಾಹಿತಿಗಾಗಿ ಹಾಗೂ ಸದರಿ ಮಾಹಿತಿಯನ್ನು ಸಂಬಂಧಪಟ್ಟ ವಿದ್ಯಾರ್ಥಿಗಳಿಗೆ ತಿಳಿಸಲು ಸೂಚಿಸಲಾಗಿದೆ.
5. ಕುಲಪತಿಗಳು/ ಕುಲಸಚಿವರು/ ಕುಲಸಚಿವರು (ಮೌಲ್ಯಮಾಪನ) ಇವರ ಆಪ್ತಕಾರ್ಯದರ್ಶಿಗಳು, ಕ.ವಿ.ವಿ., ಧಾರವಾಡ.
6. ನಿರ್ದೇಶಕರು ಅಂತರ್ಜಾಲ ವಿಭಾಗ, ಕ.ವಿ.ವಿ., ಧಾರವಾಡ ಇವರಿಗೆ ಮುಂದುವರೆದು ಸದರ ಸುತ್ತೋಲೆಯನ್ನು ಕ.ವಿ.ವಿ., ಅಂತರ್ಜಾಲದಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.